ಅರ್ಜಿದಾರರು ಮತ್ತು ಅವರ ಪರ ವಕೀಲರು ಹಾಜರಿರುತ್ತಾರೆ. ಅವರು ಜಂಟಿ ಮೇಮೋ ಸಲ್ಲಿಸಿದ್ದು ಅದನ್ನು ಪರಿಶೀಲಿಸಲಾಗಿ ಅರ್ಜಿದಾರರು ಅರ್ಜಿಯಲ್ಲಿ ಕೋರಿರುವಂತೆ ರಿಜಿಸ್ಟರ್‌ನಲ್ಲಿ ನೊಂದಣಿ ಮಾಡಿಕೊಳ್ಳಲು ತಮ್ಮ ತಕರಾರಿಲ್ಲ ಎಂದು ಎದುರುದಾರರು ನಮೂದಿಸಿರುತ್ತಾರೆ.

ಸದರಿ ದಾಖಲೆಗೆ ಅರ್ಜಿದಾರರು ಮತ್ತು ಅವರ ಪರ ವಕೀಲರು ಮತ್ತು ಎದುರುದಾರರ ಸಹಿ ಮಾಡಿದ್ದಾರೆ. ಈ ಕಾರಣದಿಂದ ಅರ್ಜಿದಾರರ ಅರ್ಜಿಯನ್ನು ಪುರಸ್ಕರಿಸಿ ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

## ಆದೇಶ

ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಕೋರಿರುವಂತೆ ಎದುರುದಾರರು ತಮ್ಮ ರಿಜಿಸ್ಟರ್‌ನಲ್ಲಿ ನೊಂದಣಿ ಮಾಡಿಕೊಂಡು ಅವಶ್ಯಕ ವಿಳಂಬ ಶುಲ್ಕವನ್ನು ಪಡೆದುಕೊಂಡು ಪ್ರಮಾಣ ಪತ್ರ ನೀಡಬೇಕೆಂದು ಆದೇಶಿಸಲಾಗಿದೆ.

2ನೇ ಅಧಿಕ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ. ಚನ್ನರಾಯಪಟ್ಟಣ.